# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಬಿ.ಟಿ.ಎಂ ಲೇಔಟ್ ಉಪ-ವಿಭಾಗದ ವಾರ್ಡ್ ಸಂಖ್ಯೆ-152 ಎಸ್.ಜಿ.ಪಾಳ್ಯ ಕಛೇರಿಯಲ್ಲಿ ದಿನಾಂಕ: 20.02.2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು

* * * * * *

ದಿನಾಂಕ-20-02-2021ರಂದು ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅದ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲ್ಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರೀಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯನ್ನು ಪ್ರಾರಂಭಿಸುತ್ತಾ, ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಇಲಾಖೆವಾರು ಚರ್ಚಿಸಿ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಸಲಹೆಯನ್ನು ನೀಡಿರುತ್ತಾರೆ. ಈ ಕುರಿತಂತೆ ಈ ಕೆಳಕಂಡ ವಿಷಯಗಳನ್ನು ಸಂಕ್ಷಿಪ್ತವಾಗಿ ಚರ್ಚಿಸಿ ಪರಿಹರಿಸುವ ಬಗ್ಗೆ ಕೈಗೊಳ್ಳುವ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನವನ್ನು ನೀಡಲಾಯಿತು.

ಸಭೆಗೆ ಹಾಜರಿದ್ದ ಅಧಿಕಾರಿ ವರ್ಗ/ ಸದಸ್ಯರು

| ಕ್ರ.ಸಂ. | ಹೆಸರು | ಮೊಬೈಲ್ ಸಂಖ್ಯೆ |
|---|---|---|
| 1 | ಶ್ರೀ.ಎಸ್.ಪ್ರಭಾಕರ್, ಮುಖ್ಯ ಅಭಿಯಂತರರು (ಪೂರ್ವ)ಬಿ.ಬಿ.ಎಂ.ಪಿ. | 9480685379 |
| 2 | ಶ್ರೀ.ಸತೀಶ್.ಡಿ ಸ.ಇಂ-152 ವಾರ್ಡ್ | 9964310730 |
| 3 | ಶ್ರೀ.ಅಜಯ್‌ಕುಮಾರ್ ಕಿರಿಯ ಆರೋಗ್ಯ ಪರಿವೀಕ್ಷಕರು | 9632222304 |
| 4 | ಶ್ರೀ ಪುರುಷೋತ್ತಮ, (ಎಲೆಕ್ಟ್ರೀಕಲ್, ಬಿ.ಬಿ.ಎಂ.ಪಿ) | 9611177415 |
| 5 | ಶ್ರೀ.ಶಶಿಧರ ಸಹಾಯಕ ಅಭಿಯಂತರರು ಮೂಲಭೂತ ಸೌಕರ್ಯ ಕೇಂದ್ರ | 9341320868 |
| 6 | ಶ್ರೀಮತಿ.ಆಶಾ.ಹೆಚ್. ಸಹಾಯಕ ಅಭಿಯಂತರರು ಬೇಸ್ಕಾಂ | 9900724229 |
| 7 | ಶ್ರೀ.ಕೃಷ್ಣ.ಸಿ ಕೆಲಸ ಪರಿವೀಕ್ಷಕರು ಬಿ.ಡ.ಬ್ಲೂ.ಎಸ್.ಎಸ್.ಬಿ | 9845768405 |
| 8 | ಶ್ರೀ ಸೈಯದ್ ನಜರೂದ್ದಿನ್, ಸದಸ್ಯರು | 9741518897 |
| 9 | ಶ್ರೀ.ವಿ.ಗಿರೀಶ್ ವಿದ್ಯತ್ ವಿಭಾಗ ಬಿ.ಬಿ.ಎಂ.ಪಿ (ದಕ್ಷಿಣ) | 8951596617 |
| 10 | ಶ್ರೀ ತಿಮ್ಮಗೌಡ ಎ.ಎಸ್.ಐ ಮಡಿವಾಳ ಪೊಲೀಸ್ ಠಾಣೆ | 9845644651 |
| 11 | ಶ್ರೀ.ಮಂಜುನಾಥ್.ಪಿ ವಾರ್ಡ್ ಮೇಲ್ವಿಚಾರಕರು ಘ.ತ್ಯಾ.ನಿ | 9740903427 |
| 12 | ಶ್ರೀ.ಎನ್.ಲೋಕೇಶ್ | 9448579144 |
| 13 | ಶ್ರೀಮತಿ.ಭೂದೇವಿ ತೋಟಗಾರಿಕೆ ಇಲಾಖೆ | 953897538 |
| 14 | ಶ್ರೀ.ಜಿನ್‌ಸನ್ | 9886263227 |
| 15 | ಶ್ರೀ.ಗಂಗಾದ್ರೀ ಮೇಲ್ವಿಚಾರಕರು ಘ.ತ್ಯಾ.ನಿ | 9980225272 |
| 16 | ಮೊಹಮದ್ ಅಜ್ಮೀರ್ ಆರೀಫ್ ಸ.ಕಾ.ನಿ.ಅ ಮೂಲಭೂತ ಸೌಕರ್ಯ ಕೇಂದ್ರ | 9900260607 |

1) ಸಭೆಯಲ್ಲಿ ಹಾಜರಿದ್ದ ಶ್ರೀ.ಜಿನ್‌ಸನ್ ರವರು ತಾವರೆಕೆರೆ ಮುಖ್ಯರಸ್ತೆ, 1ನೇ ಅಡ್ಡರಸ್ತೆ ಭುವನಪ್ಪ ಬಡಾವಣೆಯ ರಸ್ತೆಯನ್ನು ಒಳಚರಂಡಿ ಸಂಪರ್ಕಕ್ಕಾಗಿ ಬೆಂಗಳೂರು ನೀರು ಸರಬರಾಜು ಮಂಡಳಿಯವರು ರಸ್ತೆಯನ್ನು ಅಗೆದು ದುರಸ್ತಿ ಪಡಿಸದೇ ಹಾಗೆಯೇ ಬಿಟ್ಟಿರುವುದು ಕಂಡುಬಂದಿರುವುದರಿಂದ ಸದರಿ ರಸ್ತೆಯನ್ನು ದರಸ್ತಿಪಡಿಸಲು ತಿಳಿಸಿದರು.

    ಈ ಸಂಬಂಧ ಸಭೆಯಲ್ಲಿ ಹಾಜರಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಟಿ.ಎಂ ಲೇಔಟ್ ಉಪವಿಭಾಗ ರವರು ಮಾತನಾಡುತ್ತಾ ಸದರಿ ರಸ್ತೆಯ ಕಾಮಗಾರಿ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಸಂಬಂಧ ಪಟ್ಟ ಗುತ್ತಿಗೆದಾರರಿಗೆ ಕಾರ್ಯದೇಶ ನೀಡಿದ ನಂತರ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು.

2) ಹಾಗಯೇ ಶ್ರೀ.ಜಿನ್‌ಸನ್ ರವರು ಮಾತನಾಡುತ್ತಾ, ಎಸ್.ಜಿ.ಪಾಳ್ಯ ವ್ಯಾಪ್ತಿಯ ಪ್ರದೇಶದ ಪಿ.ಜಿ ಗಳಲ್ಲಿ ಹುಡುಗ ಹುಡುಗಿಯವರು ಲಿವಿಂಗ್ ಟುಗೇದರ್ ನಡೆಸುತ್ತಿರುವುದು ಕಂಡುಬಂದಿದ್ದು, ಇದರಿಂದ ಆಯಾ ಪ್ರದೇಶದ ಮಕ್ಕಳು ಮತ್ತು ಸಾರ್ವಜನಿಕರಲ್ಲಿ ಕೆಟ್ಟರೀತಿಯ ಪ್ರಭಾವ/ಪರಿಣಾಮಗಳು ಬಿರುವುದು ಮತ್ತು ಮುಜುಗರವಾಗುತ್ತಿರುವುದರಿಂದ ಈ ಬಗ್ಗೆ ಸೂಕ್ತ ಕ್ರಮವಹಿಸಲು ತಿಳಿಸಿದರು.

    ಅದರಂತೆ ಮಾನ್ಯ ನೋಡಲ್ ಅಧಿಕಾರಿಗಳು ಮಾತನಾಡಿ, ಮೇಲ್ಕಂಡ ವಿಷಯದ ಬಗ್ಗೆ ಗಂಭಿರವಾಗಿ ಪರಿಗಣಿಸಿ ಸೂಕ್ತ ಕ್ರಮಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಪೊಲೀಸ್ ಅಧಿಕಾರಿಗಳಿಗೆ ಮತ್ತು ಹಿರಿಯ ಆರೋಗ್ಯ ಪರಿವೀಕ್ಷರವರಿಗೆ ಸೂಚಿಸಿದರು.

S. Prabhakar

3) ಸಭೆಯಲ್ಲಿ ಹಾಜರಿದ್ದ ಪೊಲೀಸ್ ಅಧಿಕಾರಿಗಳು ಮಾತನಾಡಿ ಭುವನಪ್ಪ ಬಡಾವಣೆಯಲ್ಲಿ ಒಂದು ಪೊಲೀಸ್ ಚೌಕಿ ಅವಶ್ಯಕವಿರುತ್ತದೆ ಎಂದು ಅಭಿಪ್ರಾಯಿಸಿದರು. ಈ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡಿ, ಈ ಬಗ್ಗೆ ತಾವೇ ಸೂಕ್ತವಾದ ಸ್ಥಳವನ್ನು ಗುರುತಿಸಿಕೊಟ್ಟರೆ ಪೊಲೀಸ್ ಚೌಕಿ ನಿರ್ಮಿಸಲು ಬಿ.ಬಿ.ಎಂ.ಪಿ ವತಿಯಿಂದ ಕ್ರಮವಹಿಸಲಾಗುವುದು.

4) ಮಾನ್ಯ ನೋಡಲ್ ಅಧಿಕಾರಿಗಳು ಮಾತನಾಡಿ, ಪ್ರಸ್ತುತ ಸಭೆ ನಡೆಯುತ್ತಿರುವ ಉದ್ಯಾನವನ **Gazebo** ಅನ್ನು ಸ್ವಚ್ಛವಗಿಡಲು ಸಭೆಗೆ ಹಾಜರಿದ್ದ, ಶ್ರೀಮತಿ ಭೂದೇವಿ ತೋಟಗಾರಿಕೆ ಇಲಾಖೆರವರಿಗೆ ಸೂಚಿಸಿದರು.

5) ಶ್ರೀ ಲೋಕೇಶ್ ರವರು ಮಾತನಾಡಿ, ಮಾರುತಿನಗರ ಸಿಟಿ ಕ್ಲಿನಿಕ್ ಹತ್ತಿರವಿರುವ ಬೀದಿ ದೀಪ ಉರಿಯುತ್ತಿರುವುದಿಲ್ಲ ಎಂದು ತಿಳಿಸಿದರು. ಈ ಬಗ್ಗೆ ಮಾನ್ಯ ಅಧ್ಯಕ್ಷರು ಮಾತನಾಡಿ ಸಂಬಂಧ ಪಟ್ಟ ಇಲಾಖೆವತಿಯಿಂದ ಕ್ರಮಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಟಿ.ಎಂ ಲೇಔಟ್ ಉಪವಿಭಾಗ ರವರಿಗೆ ಸೂಚಿಸಿದರು.

6) ಹಾಗೆಯೇ ಶ್ರೀ ಲೋಕೇಶ್‌ರವರು ಮಾತನಾಡಿ, ಬೃಂದಾವನ ನಗರ 2ನೇ ಮುಖ್ಯರಸ್ತೆಯಲ್ಲಿ ಬಿ.ಡಬ್ಲೂ.ಎಸ್.ಎಸ್.ಬಿ ಕಾಮಗಾರಿ ಪೂಜೆ ನೆರವೇರಿಸಿ ಒಂದು ತಿಂಗಳಾದರು ಕೆಲಸ ಪ್ರಾರಂಭಿಸಿರುವುದಿಲ್ಲ ಎಂದು ಸಭೆಗೆ ತಿಳಿಸಿದರು. ಮಾನ್ಯ ಅಧ್ಯಕ್ಷರು ಈ ಬಗ್ಗೆ ಸುಕ್ತ ಕ್ರಮವಹಿಸಲು ಸಭೆಯಲ್ಲಿ ಹಾಜರಿದ್ದ ಶ್ರೀ ಕೃಷ್ಣ ಕೆಲಸ ಪರಿವೀಕ್ಷರು ಬಿ.ಡಬ್ಲೂ.ಎಸ್.ಎಸ್.ಬಿ ರವರಿಗೆ ತಿಳಿಸಿದರು.

7) ಮಾನ್ಯ ಅಧ್ಯಕ್ಷರು ಮಾತನಾಡಿ, ಸೆಂಟ್ ಜಾನ್ಸ್ ವುಡ್ ರಸ್ತೆಯಲ್ಲಿ ರಸ್ತೆ ಅಗೆತವಾಗಿರುವುದರಿಂದ ಕೂಡಲೇ ರಸ್ತೆ ಅಗೆತದ ಭಾಗವನ್ನು ಮುಚ್ಚಲು ಅಗತ್ಯ ಕ್ರಮವಹಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಟಿ.ಎಂ ಲೇಔಟ್ ಉಪವಿಭಾಗ ರವರಿಗೆ ಸೂಚಿಸಿದರು.

8) ಮಾನ್ಯ ಅಧ್ಯಕ್ಷರು ಮಾತನಾಡಿ, ಪಾಲಿಕೆ ವಾರ್ಡ್ ಅನುದಾನಡಿಯಲ್ಲಿ 2021-22ನೇ ಸಾಲಿಗೆ ಮಿಸಲಿಟ್ಟ ಅನುದಾನಕ್ಕೆ ವಾರ್ಡ್ ಸದಸ್ಯರೊಂದಿಗೆ ಸಮಾಲೊಚನೆ ನಡೆಸಿ, ಚರ್ಚಿಸಿ ಅಗತ್ಯವಾಗಿರುವ ಕಾಮಗಾರಿಗಳನ್ನು ಅಳವಡಿಸಿಕೊಂಡು ಕ್ರಿಯೋಜನೆಯನ್ನು ತಯಾರಿಸಲು ತಿಳಿಸಿದರು.

9) ಶ್ರೀ.ನವೀನ್ ಕಂದಾಯ ಪರಿವೀಕ್ಷರು ಮಾತನಾಡಿ, ಜನವರಿ 2021ರ ಅಂತ್ಯದಲ್ಲಿ ರೂ.1.32 ಕೊಟಿ ಕಂದಾಯವನ್ನು ಸಂಗ್ರಹಿಸಲಾಗಿರುತ್ತದೆ. 33 ಆಸ್ತಿಗಳನ್ನು ಪರಿಷ್ಕರಿಸಲಾಗಿರುತ್ತದೆ ಮತ್ತು ಪ್ರತಿ ಬುಧವಾರ ತೆರಿಗೆ ಡ್ರೈವ್‌ನ್ನು ಹಮ್ಮಿಕೊಳ್ಳಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ, ಅದ್ಯಕ್ಷರು ಮಾತನಾಡಿ, ಈ ಸಭೆಗೆ ಗೈರಾದ ಅಧಿಕಾರಿಗಳ ವಿವರಗಳನ್ನು ಮುಂದಿನ ಸಭೆಯಲ್ಲಿ ಸಲ್ಲಿಸಲು ತಿಳಿಸುತ್ತಾ, ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂಧಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಶ್ರೀ. ಸತೀಶ್.ಡಿ)
ಕಾರ್ಯದರ್ಶಿಗಳು
ವಾರ್ಡ್-152 ಎಸ್.ಜಿ.ಪಾಳ್ಯ

S. Prabhakar
(ಶ್ರೀ. ಎಸ್.ಪ್ರಭಾಕರ್)
ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್-152 ಎಸ್.ಜಿ.ಪಾಳ್ಯ

<u>ಪ್ರತಿಯನ್ನು:</u>

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
6. ಅಧೀಕ್ಷಕ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ.ಲೇಔಟ್ ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೋರಮಂಗಲ ಉಪ-ವಿಭಾಗ ರವರಿಗೆ ಮುಂದಿನ ಕ್ರಮಕ್ಕೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲಮಂಡಳಿ, ಬಿ.ಟಿ.ಎಂ ರವರಿಗೆ ಮುಂದಿನ ಕ್ರಮಕ್ಕೆ
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಭೂತ ಸೌಕರ್ಯ(ದ) ರವರಿಗೆ ಮುಂದಿನ ಕ್ರಮಕ್ಕೆ.